ಗಾಕಿಂಯುಂಕ್ಕಾ

ಕರ್ನಾಟಕ ವಿಧಾನ ಪರಿಷತ್ತು

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು	: ಶ್ರೀಮತಿ ಎಸ್. ವೀಣಾ ಅಚ್ಚಯ್ಯ
ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ	: 1309
ಉತ್ತರಿಸಬೇಕಾದ ದಿನಾಂಕ	: 08-03-2022
ಉತ್ತರಿಸಬೇಕಾದ ಸಚಿವರು	: ಸಹಕಾರ ಸಚಿವರು

ಕ್ರಸಂ	ಪ್ರಶ್ನೆ	ಉತ್ತರ
ಅ)	ಕೊಡಗು ಜಿಲ್ಲೆಯ ಸಹಕಾರ ಸಂಘಗಳಿಗೆ ಸರ್ಕಾರದಿಂದ ಬರಲು ಬಾಕಿ ಇರುವ ಬಡ್ಡಿ ಸಹಾಯಧನ ಇದುವರೆಗೂ ಬಿಡುಗಡೆಯಾಗದಿರುವುದರಿಂದ, ಜಿಲ್ಲೆಯಲ್ಲಿರುವ ಸಹಕಾರ ಸಂಘಗಳ ವ್ಯವಹಾರ ಹಾಗೂ ಅಭಿವೃದ್ಧಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಕೊಡಗು ಜಿಲ್ಲೆಯ ಸಹಕಾರ ಸಂಘಗಳಿಗೆ ಸರ್ಕಾರದಿಂದ ಬರಲು ಬಾಕಿ ಇರುವ ಕೃಷಿ ಸಾಲಗಳ ಮೇಲಿನ ಬಡ್ಡಿ ಸಹಾಯಧನ ಇದುವರೆಗೂ ಬಿಡುಗಡೆಯಾಗದಿರುವುದರಿಂದ ಜಿಲ್ಲೆಯಲ್ಲಿನ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ವ್ಯವಹಾರ ಹಾಗೂ ಅಭಿವೃದ್ಧಿಗೆ ತೊಂದರೆಯಾಗಿರುವುದಿಲ್ಲ. ಕೃಷಿ ಸಾಲಗಳ ಮೇಲಿನ ಬಡ್ಡಿ ಸಹಾಯಧನ ಯೋಜನೆಯಲ್ಲಿ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್(ಡಿಸಿಸಿ)ಗಳು, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ (ಪ್ಯಾಕ್ಸ್)ಗಳಿಂದ ರೈತರು ಪಾವತಿಸಿದ ಅಸಲನ್ನು ಮಾತ್ರ ಜಮಾ ತೆಗೆದುಕೊಂಡು, ಯಾವುದೇ ಬಡ್ಡಿಯನ್ನು ವಸೂಲು ಮಾಡದೇ ಸರ್ಕಾರದಿಂದ ಬಿಡುಗಡೆಯಾಗುವ ಬಡ್ಡಿ ಸಹಾಯಧನವನ್ನು ಮಾತ್ರ ಜಮಾ ಪಡೆಯಬೇಕಾಗಿರುವುದರಿಂದ ಪ್ಯಾಕ್ಸ್‌ಗಳಿಗೆ ತೊಂದರೆಯಾಗುವುದಿಲ್ಲ.
ಆ)	ಕೊಡಗು ಜಿಲ್ಲೆಯ ಸಹಕಾರ ಸಂಘಗಳಿಗೆ ಸರ್ಕಾರದಿಂದ ಬರಲು ಬಾಕಿ ಇರುವ ಹಣದ ಮೊತ್ತದ ವಿವರಗಳೇನು; (ಸಂಪೂರ್ಣ ವಿವರ ನೀಡುವುದು)	ಕೊಡಗು ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕಿಗೆ ಕೃಷಿ ಸಾಲಗಳ ಬಡ್ಡಿ ಸಹಾಯಧನ ಯೋಜನೆಯಲ್ಲಿ 2021-22 ನೇ ಸಾಲಿನಲ್ಲಿ ಜನವರಿ ಅಂತ್ಯದವರೆಗೆ ರೂ.20.31 ಕೋಟಿಗಳ ಬಡ್ಡಿ ಸಹಾಯಧನ ಬಿಡುಗಡೆ ಮಾಡಿದ್ದು, ಇದರಲ್ಲಿ ರೂ.8.02 ಕೋಟಿಗಳನ್ನು ಪ್ಯಾಕ್ಸ್ ಮಾರ್ಜಿನ್ ಮೊತ್ತವಾಗಿ ಡಿಸಿಸಿ ಬ್ಯಾಂಕಿನಿಂದ ಈಗಾಗಲೇ ಬಿಡುಗಡೆ ಮಾಡಲಾಗಿದೆ. ಬಾಕಿ ಉಳಿದ ರೂ.28.62 ಕೋಟಿಗಳಲ್ಲಿ ದಿ:05.03.2022 ರಂದು ರೂ.25.92 ಕೋಟಿ ಅನುದಾನವನ್ನು ಡಿಸಿಸಿ ಬ್ಯಾಂಕಿಗೆ ಬಿಡುಗಡೆ ಮಾಡಿದ್ದು, ಎರಡು ದಿನದೊಳಗಾಗಿ ಪ್ಯಾಕ್ಸ್ ಮಾರ್ಜಿನ್ ಮೊತ್ತವನ್ನು ಡಿಸಿಸಿ ಬ್ಯಾಂಕಿನಿಂದ ಬಿಡುಗಡೆ ಮಾಡಲಾಗುವುದು. ರೂ.2.70 ಕೋಟಿಗಳು ಮಾತ್ರ ಡಿಸಿಸಿ ಬ್ಯಾಂಕಿಗೆ ಬಿಡುಗಡೆಗೆ ಬಾಕಿ ಉಳಿಯುತ್ತದೆ.
ಇ)	ಜಿಲ್ಲೆಯ ಸಹಕಾರ ಸಂಘಗಳಿಗೆ ಸರ್ಕಾರದಿಂದ ಬರಲು ಬಾಕಿ ಇರುವ ಮೊತ್ತವನ್ನು ಯಾವ ಕಾಲಮಿತಿಯೊಳಗೆ ಬಿಡುಗಡೆ ಮಾಡಲಾಗುವುದು?	ಬಡ್ಡಿ ಸಹಾಯಧನ ಬಿಡುಗಡೆ ನಿರಂತರ ಕ್ರಮವಾಗಿದ್ದು, ಕಾಲಕಾಲಕ್ಕೆ ಬಿಡುಗಡೆ ಮಾಡಲಾಗುತ್ತಿದೆ. ಬಿಡುಗಡೆಗೆ ಬಾಕಿ ಉಳಿಯುವ ಮೊತ್ತವನ್ನು 2022-23 ನೇ ಸಾಲಿನ ಮೊದಲನೇ ತ್ರೈಮಾಸಿಕದಲ್ಲಿ ಬಿಡುಗಡೆ ಮಾಡಲಾಗುವುದು.

ಸಂಖ್ಯೆ : ಸಿಒ 83 ಸಿಎಲ್‌ಎಸ್ 2022

(ಎಸ್. ಟಿ. ಸೋಮಶೇಖರ್)
ಸಹಕಾರ ಸಚಿವರು